ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(2 ಮತ್ತು 3ನೇ ಖಂಡಗಳು, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.)

. ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು) : ಮಾನ್ಯ ಉಪಾಧ್ಯಕ್ಷರೆ, "2005ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ,

"2005ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿತು.

ಉಪಾಧ್ಯಕ್ಷರು : ಈಗ ಸದನವನ್ನು ಮಧ್ಯಾಹ್ನ 2.30 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು 1 ಗಂಟೆ 20 ನಿಮಿಷಕ್ಕೆ ಮುಂದೂಡಲ್ಪಟ್ಟು ಮತ್ತೆ 2.30 ಗಂಟೆಗೆ ಸಮಾವೇಶಗೊಳ್ಳಲು ನಿಶ್ಚಯಿಸಿತು.)

(ಸದನವು ಪುನಃ ಮಧ್ಯಾಹ್ನ 3.10 ಗಂಟೆಗೆ ಸಮಾವೇಶಗೊಂಡಿತು.

ಸನ್ಮಾನ್ಯ ಅಧ್ಯಕ್ಷರು (ಶ್ರೀ ಕೃಷ್ಣ) ಅಧ್ಯಕ್ಷರ ಪೀಠವನ್ನು ಅಲಂಕರಿಸಿದರು.

ಅಧ್ಯಕ್ಷರು : ಈಗ ಪ್ರಶ್ನೋತ್ತರವನ್ನು ತೆಗೆದುಕೊಳ್ಳೋಣ.

7. ಅಧ್ಯಕ್ಷರ ಅಪ್ಪಣೆ ಮೇರೆಗೆ

ವಿಷಯ: ಸರ್ಕಾರ ಸಿಂಡಿಕೇಟ್‌ಗೆ ನಾಮಿನೇಟ್ ಮಾಡಿ ಕಳುಹಿಸಿರುವುದನ್ನು ವಿ.ಸಿ. ಯವರು ರಿಜೆಕ್ಟ್ ಮಾಡಿರುವ ಬಗ್ಗೆ.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ : ಮಾನ್ಯ ಅಧ್ಯಕ್ಷರೇ, ತಾವು ಪ್ರಶ್ನೋತ್ತರವನ್ನು ತೆಗೆದುಕೊಳ್ಳುವುದಕ್ಕೂ ಮೊದಲು, ಸರ್ಕಾರ ಸಿಂಡಿಕೇಟ್ ನಾಮಿನೇಷನ್ ಮಾಡಿ ಕಳುಹಿಸಿರುವಂಥಾದ್ದನ್ನು ವಿ.ಸಿ. ಯವರು ರಿಜೆಕ್ಟ್ ಮಾಡಿದ್ದಾರೆ. ಅದರ ಬಗ್ಗೆ ನಾವು ಸ್ವಲ್ಪ ಚರ್ಚೆ ಮಾಡುವುದಕ್ಕೆ ತಾವು ಅವಕಾಶವನ್ನು ಮಾಡಿಕೊಡಬೇಕು.

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಕೈಗಾರಿಕೆ ಸಚಿವರು) : ಈಗ ಮಂತ್ರಿಗಳು ಬರುತ್ತಾರೆ, ಬಂದಮೇಲೆ ತೆಗೆದುಕೊಳ್ಳಬಹುದು.

ಅಧ್ಯಕ್ಷರು : ಹೇಳಿ.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ : ಮಾನ್ಯ ಅಧ್ಯಕ್ಷರೇ, ಮೊನ್ನೆ ಸಿಂಡಿಕೇಟ್‌ಗೆ ...

ಶ್ರೀ ಪಿ.ಜಿ.ಆರ್. ಸಿಂಧ್ಯ : ಮಾನ್ಯ ಜಿ.ವಿ. ಶ್ರೀರಾಮರೆಡ್ಡಿಯವರೇ, ಈಗ ಮಾನ್ಯ ಮಂತ್ರಿಗಳಾದ ಮಂಜುನಾಥ್‌ರವರು ಬರುತ್ತಾರೆ. ಅವರು ಬಂದಮೇಲೆ ತೆಗೆದುಕೊಳ್ಳಬಹುದು, so that he can reply ಅಂತ ಅಷ್ಟೆ, ನನ್ನದು ಏನೂ ಇಲ್ಲ. ನೀವು ಮಾತನಾಡುವುದಾದರೆ ಮಾತನಾಡಿ.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ : ಮಾನ್ಯ ಅಧ್ಯಕ್ಷರೇ, ಅವರು ಬರುತ್ತಾರೋ, ಇಲ್ಲವೊ, ಅವರಿಗೆ ಆರೋಗ್ಯ ಸರಿಯಾಗಿ ಇಲ್ಲ.

ಶ್ರೀ ಜೆ.ಸಿ. ಮಾಧುಸ್ವಾಮಿ : ನೋಡೋಣ.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ : ಆಯಿತು.

ಅಧ್ಯಕ್ಷರು : ಈಗ ಪ್ರಶ್ನೋತ್ತರವನ್ನು ತೆಗೆದುಕೊಳ್ಳೋಣ.

8. ಪ್ರಶ್ನೋತ್ತರಗಳು

ಅ) ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ನೀಡಲಾದ ಉತ್ತರಗಳು.

ನ್ಯಾಷನಲ್ ಹಾರ್ಟಿಕಲ್ಚರ್ ಬೋರ್ಡ್‌ನಿಂದ ಅನುಷ್ಠಾನಗೊಂಡ ಯೋಜನೆಗಳು.

601(6251) : ಶ್ರೀ ಡಿ.ಆರ್. ಪಾಟೀಲ್ (ಗದಗ್) ಮಾನ್ಯ ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತೋಟಗಾರಿಕೆಯಲ್ಲಿ ತೊಡಗಿರುವ ರೈತರಿಗೆ ಅನುಕೂಲವಾಗುವ ರಾಜ್ಯ ಮತ್ತು ಕೇಂದ್ರ ಸರ್ಕಾರದ ಕಾರ್ಯಕ್ರಮಗಳು ಯಾವುವು?

ಆ) ನ್ಯಾಷನಲ್ ಹಾರ್ಟಿಕಲ್ಚರ್ ಬೋರ್ಡ್ ಮುಖಾಂತರ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳು ಯಾವುವು?

ಇ) ಎನ್.ಎಚ್.ಬಿ. ಯಿಂದ ಕಳೆದ ಐದು ವರ್ಷಗಳಲ್ಲಿ ಕರ್ನಾಟಕಕ್ಕೆ ಮಂಜೂರಾದ ಸಹಾಯವೆಷ್ಟು; ಆ ಪೈಕಿ ಲಾಭ ಪಡೆದುಕೊಂಡ ಜಿಲ್ಲೆಗಳಾವುವು (ಜಿಲ್ಲಾವಾರು ವಿವರ ನೀಡುವುದು)

ಈ) ಯೋಜನೆಗಳ ಲಾಭವನ್ನು ರೈತರಿಗೆ ವರ್ಗಾಯಿಸಲು ಸರ್ಕಾರದ ಕ್ರಮಗಳೇನು?

ಶ್ರೀ ಆರ್. ಶ್ರೀನಿವಾಸ್ (ತೋಟಗಾರಿಕೆ ಸಚಿವರು):

ಅ) ತೋಟಗಾರಿಕೆಯಲ್ಲಿ ತೊಡಗಿರುವ ರೈತರಿಗೆ ಅನುಕೂಲವಾಗಲು ಹಮ್ಮಿಕೊಂಡಿರುವ ಕಾಯಕ್ರಮಗಳು ಈ ಕೆಳಗಿನಂತಿವೆ.

1. ತೋಟಗಾರಿಕೆ ಕ್ಷೇತ್ರ ಮತ್ತು ನರ್ಸರಿಗಳ ಅಭಿವೃದ್ಧಿ ಮತ್ತು ನಿರ್ವಹಣೆ ಯೋಜನೆಯಡಿ ವಿವಿಧ ರೀತಿಯ ತೋಟಗಾರಿಕೆ ಬೆಳೆಗಳ ಉತ್ಕೃಷ್ಟ ಗುಣಮಟ್ಟದ ಕಸಿ/ಸಸಿಗಳನ್ನು ಉತ್ಪಾದಿಸಿ, ರೈತರಿಗೆ ಸುಲಭದರದಲ್ಲಿ ವಿತರಿಸುವ ಮೂಲಕ ತೋಟಗಾರಿಕೆ ಬೆಳೆಗಳ ಪ್ರದೇಶ ವಿಸ್ತರಣೆಗೆ, ಉತ್ಪಾದಕತೆ ಮತ್ತು ಉತ್ಪಾದನೆ ಹೆಚ್ಚಿಸುವಲ್ಲಿ ಸಹಾಯಕವಾಗಿದೆ.
2. ಇಲಾಖಾ ಪ್ರಯೋಗ ಶಾಲೆಗಳಲ್ಲಿ ರೈತರ ತೋಟಗಳಲ್ಲಿನ ಮಣ್ಣು ಮತ್ತು ನೀರಿನ ಮಾದರಿಗಳನ್ನು ವಿಶ್ಲೇಷಿಸಿ ಅದಕ್ಕನುಗುಣವಾಗಿ ವಿವಿಧ ತೋಟಗಾರಿಕೆ ಬೆಳೆಗಳ ಬೇಸಾಯವನ್ನು ಉತ್ತಮ ಪಡಿಸಲು ಸೂಕ್ತ ಸಲಹೆ ನೀಡಲಾಗುತ್ತಿದೆ.